## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಎಂ.ಎಸ್.ರವಿಕುಮಾರ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಕುಣಿಗಲ್ ಮತ್ತು ಶ್ರೀ ನಾಗರಾಜಯ್ಯ, ಹಿಂದಿನ ವ್ಯವಸ್ಥಾಪಕರು, ತಾಲ್ಲೂಕು ಪಂಚಾಯತಿ, ಕಛೇರಿ ಕುಣಿಗಲ್ ಹಾಗೂ ಶ್ರೀ ಆರ್. ಶ್ರೀನಿವಾಸ್, ಹಿಂದಿನ ಸಹಾಯಕ ಲೆಕ್ಕಾಧಿಕಾರಿ,ತಾಲ್ಲೂಕು ಪಂಚಾಯತಿ, ಕಛೇರಿ ಕುಣಿಗಲ್ ಇವರುಗಳ ವಿರುದ್ಧ ಜಂಟಿ ಇಲಾಖಾ ವಿಚಾರಣೆ ಜರುಗಿಸಲು ಬದಲಿ ವಿಚಾರಣಾಧಿಕಾರಿಯನ್ನು ನೇಮಿಸುವ ಕುರಿತು ಆದೇಶ

ಓದಲಾಗಿದೆ: ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 02 ವಿಸೇಬಿ 2014 ದಿ: 06-01-2015

------

### ಪ್ರಸ್ತಾವನೆ:

ಮೇಲೆ ಓದಲಾದ ಆದೇಶದಲ್ಲಿ ತುಮಕೂರು ಜಿಲ್ಲೆಯ ಕುಣಿಗಲ್ ತಾಲ್ಲೂಕು ಪಂಚಾಯತಿಯಲ್ಲಿ ಎಸ್‌ಜಿಎಸ್‌ವೈ ಯೋಜನೆಯಡಿ, ನಡೆದಿರುವ ಅವ್ಯವಹಾರಗಳಲ್ಲಿ ಭಾಗಿಯಾಗಿರುವರೆನ್ನಲಾದ ಈ ಕೆಳಕಂಡ ಅಧಿಕಾರಿ/ನೌಕರರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 11ನ್ನು ಓದುವುದರೊಂದಿಗೆ ನಿಯಮ 13 ರಡಿ ಜಂಟಿ ಇಲಾಖಾ ವಿಚಾರಣೆ ನಡೆಸಲು ಶ್ರೀ ಸಿ.ಆರ್. ಜವೀದ್ ಪಾಷಾ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

1) ಶ್ರೀ ಎಂ.ಎಸ್.ರವಿಕುಮಾರ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಕುಣಿಗಲ್
2) ಶ್ರೀ ನಾಗರಾಜಯ್ಯ, ಹಿಂದಿನ ವ್ಯವಸ್ಥಾಪಕರು, ತಾಲ್ಲೂಕು ಪಂಚಾಯತಿ, ಕಛೇರಿ ಕುಣಿಗಲ್
3) ಶ್ರೀ ಆರ್. ಶ್ರೀನಿವಾಸ್, ಹಿಂದಿನ ಸಹಾಯಕ ಲೆಕ್ಕಾಧಿಕಾರಿ,ತಾಲ್ಲೂಕು ಪಂಚಾಯತಿ, ಕಛೇರಿ ಕುಣಿಗಲ್

ಆದರೆ, ವಿಚಾರಣಾಧಿಕಾರಿಯವರ ಮನೆ ವಿಳಾಸಕ್ಕೆ ಕಳುಹಿಸಲಾಗಿದ್ದ ಆದೇಶದ ಪ್ರತಿಯು ಸ್ವೀಕೃತವಾಗದೇ ವಾಪಸ್ಸು ಬಂದಿರುವುದರಿಂದ ಶ್ರೀ ಸಿ.ಆರ್. ಜವೀದ್ ಪಾಷಾ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರ ಬದಲಿಗೆ ಶ್ರೀ ಎಂ. ಎಸ್. ಹೆಗ್ಡೆ ನಾಗ್ರೆ, ನಿವೃತ್ತ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಲು ಸರ್ಕಾರವು ನಿರ್ಧರಿಸಿ ಈ ಕೆಳಗಿನಂತೆ ಅದೇಶಿಸಿದೆ.

### ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 02 ವಿಸೇಬಿ 2014 ಬೆಂಗಳೂರು ದಿನಾಂಕ:24-02-2015

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡ ಅಧಿಕಾರಿ/ನೌಕರರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 13 ರಡಿಯಲ್ಲಿ ಜಂಟಿ ಇಲಾಖಾ ವಿಚಾರಣೆ ನಡೆಸಲು ಶ್ರೀ ಸಿ.ಆರ್. ಜವೀದ್ ಪಾಷಾ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರ ಬದಲಿಗೆ ಶ್ರೀ ಎಂ. ಎಸ್. ಹೆಗ್ಡೆ ನಾಗ್ರೆ (ನಿವೃತ್ತ) ಇವರನ್ನು ವಿಚಾರಣಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ.

1) ಶ್ರೀ ಎಂ.ಎಸ್.ರವಿಕುಮಾರ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಕುಣಿಗಲ್
2) ಶ್ರೀ ನಾಗರಾಜಯ್ಯ, ಹಿಂದಿನ ವ್ಯವಸ್ಥಾಪಕರು, ತಾಲ್ಲೂಕು ಪಂಚಾಯತಿ, ಕಛೇರಿ ಕುಣಿಗಲ್
3) ಶ್ರೀ ಆರ್. ಶ್ರೀನಿವಾಸ್, ಹಿಂದಿನ ಸಹಾಯಕ ಲೆಕ್ಕಾಧಿಕಾರಿ,ತಾಲ್ಲೂಕು ಪಂಚಾಯತಿ, ಕಛೇರಿ ಕುಣಿಗಲ್

GO

ಶಿಸ್ತು ಪ್ರಾಧಿಕಾರಿಯ ಪರವಾಗಿ ಪ್ರಕರಣವನ್ನು ವಿಚಾರಣಾಧಿಕಾರಿಯವರ ಮುಂದೆ ಮಂಡಿಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11(5)(ಸಿ) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸಹಾಯಕ ಕಾರ್ಯದರ್ಶಿ ಜಿಲ್ಲಾ ಪಂಚಾಯತಿ, ತುಮಕೂರು ಇವರು ಮಂಡನಾಧಿಕಾರಿಯಾಗಿ ಮುಂದುವರೆದಿರುತ್ತಾರೆ.

ವಿಚಾರಣಾಧಿಕಾರಿಯವರು ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11 ರಲ್ಲಿ ನಿಗದಿ ಪಡಿಸಿರುವ ಕಾರ್ಯವಿಧಾನ ಪ್ರಕಾರ ವಿಚಾರಣೆ ಜರುಗಿಸಿ ವಿಚಾರಣಾ ವರದಿಯನ್ನು 3 ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳಿಗೆ ಸೂಕ್ತ ಸ್ಥಳಾವಕಾಶ, ಶೀಘ್ರಲಿಪಿಗಾರರ ಸೇವೆ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು(ಗ್ರಾ) ಇವರು ಕ್ರಮ ಕೈಗೊಳ್ಳತಕ್ಕದ್ದು

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ/6/ ಸೇಇವಿ/2010 ದಿನಾಂಕ: 28-04-2011 ರನ್ವಯ ವಾಹನ ಭತ್ಯೆಯೂ ಸೇರಿದಂತೆ ರೂ. 15,000/- ಗಳ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

28/2/11
(ಸಿದ್ಧಮಲ್ಲಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ.ಬಿ &ಸಿ),(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು,(ಎ & ಇ)) ಕರ್ನಾಟಕ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು/ಬೆಂಗಳೂರು(ಗ್ರಾ)
4. ಶ್ರೀ ಎಂ. ಎಸ್. ಹೆಗ್ಡೆ ನಾಗ್ರೆ, ನಿವೃತ್ತ ನ್ಯಾಯಾಧೀಶರು, ಮತ್ತು ವಿಚಾರಣಾಧಿಕಾರಿಗಳು ಟಿ.ಎಫ್-4, ಸೂರ್ಯ ಕ್ಲಾಸಿಕ್, 4ನೇ ಮೇನ್, ರಾಮಮಂದಿರ ಬೀದಿ ಹತ್ತಿರ, ಯಲಚೇನಹಳ್ಳಿ ಬಸ್ ನಿಲ್ದಾಣ, ಕನಕಪುರ, ರಸ್ತೆ, ಜೆ.ಪಿ. ನಗರ ಅಂಚೆ, ಬೆಂಗಳೂರು-78, (ಮೊ.ನಂ. 9449747187)
5. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ತುಮಕೂರು ( ಮಂಡನಾಧಿಕಾರಿ).
6. ಆಪಾದಿತ ಅಧಿಕಾರಿ/ನೌಕರರುಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಇವರ ಮುಖಾಂತರ)
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್)/ಅಪರ ಕಾರ್ಯದರ್ಶಿ (ಆಡಳಿತ), ಗ್ರಾ .ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
8. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.